**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ**

**ಸಿ.ಸಿ. 254/2023**

ಸಾಕ್ಷಿದಾರರ ಹೇಳಿಕೆಃ

| | | | |
|---|---|---|---|
| **ಹೆಸರು** | : | ಗುಡದಪ್ಪ | ಚಾಸಾಃ **4** ಪ್ರಾಸಾಃ **4** |
| **ತಂದೆಯ ಹೆಸರು** | : | ಹನುಮಂತಪ್ಪ | |
| **ವಯಸ್ಸು** | : | **48** ವರ್ಷ | |
| **ವೃತ್ತಿ** | : | ವ್ಯವಸಾಯ | |
| **ವಾಸಸ್ಥಳ** | : | ಹೊಳೆಮಾದಾಪುರ | |

ದಿನಾಂಕಃ **17-02-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಚಾಸಾ-1 ಗೊತ್ತಿಲ್ಲ. ಚಾಸಾ-5 ಗೊತ್ತು. ಈಗೇ ಸುಮಾರು 2 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ 5 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ, ಕಚ್ಚ ನಕಾಶೆಯನ್ನು ತಯಾರಿಸಿ ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ನಿಪಿ-4 ರಿಂದ 9, 11 ಮತ್ತು 12 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ.

ಸ್ಥಳ ಮಹಜರ್ ಅನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು, ಕಚ್ಚ ನಕಾಶೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು, ಅಮಾನತ್ತು ಮಹಜರ್ ಅನ್ನು ಈಗಾಗಲೇ ನಿಪಿ-10 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-10(ಬಿ) ಎಂದು, ಸ್ಥಳ ಮಹಜರ್ ಸಮಯದಲ್ಲಿ ನೀಡಿದ

ನೋಟೀಸನ್ನು ನಿಪಿ-28 ಎಂದು, ಸಾಕ್ಷಿಯ ಸಹಿಯನ್ನು ನಿಪಿ-28(ಎ) ಎಂದು, ಅಮಾನತ್ತು ಮಹಜರ್ ಸಮಯದಲ್ಲಿ ನೀಡಿದ ನೋಟೀಸನ್ನು ನಿಪಿ-29 ಎಂದು, ಸಾಕ್ಷಿಯ ಸಹಿಯನ್ನು ನಿಪಿ-29(ಎ) ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ದಿಃ 08-07-2022 ರಂದು ಪೊಲೀಸರಿಂದ ನಿಪಿ-28 ರಂತೆ ನೋಟೀಸನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಅದೇ ದಿನ ಪೊಲೀಸರು ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ಬೆಳಗ್ಗೆ 10-00 ರಿಂದ 11-00 ಗಂಟೆ ಸಮಯದಲ್ಲಿ ನಿಪಿ-2 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ, ನಿಪಿ-3 ರಂತೆ ಕಚ್ಚ ನಕಾಶೆಯನ್ನು ತಯಾರಿಸಿ, ನಿಪಿ-4 ರಿಂದ 9 ರಂತೆ ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ.

ಅದೇ ದಿನ ಪೊಲೀಸರಿಂದ ನಿಪಿ-29 ರಂತೆ ನೋಟೀಸನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಹೊನ್ನಾಳಿ ಪೊಲೀಸ್ ಠಾಣೆಯ ಆವರಣದಲ್ಲಿ ನನ್ನ, ಚಾಸಾ-1 ಮತ್ತು 5 ರವರ ಸಮಕ್ಷಮ ಬೆಳಗ್ಗೆ 11-30 ರಿಂದ 12-30 ಗಂಟೆ ಸಮಯದಲ್ಲಿ ಕೆಎ-17/ಇಎಂ-0801 ಹಿರೋ ಪ್ಯಾಷನ್ ಪ್ರೋ ಬೈಕನ್ನು ಅಮಾನತ್ತು ಪಡಿಸಿಕೊಂಡು ನಿಪಿ-10 ರಂತೆ ಅಮಾನತ್ತು ಮಹಜರ್ ಕ್ರಮ ಜರುಗಿಸಿ ನಿಪಿ-11 ಮತ್ತು 12 ರಂತೆ ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.